"ಶುದ್ಧ ಕನ್ನಡ ನಾಮಫಲಕ ಜಾಗೃತಿ ಅಭಿಯಾನ"ಕ್ಕೆ ಚಾಲನೆ:

ಕನ್ನಡ ಅಭಿವೃದ್ಧಿ ಪ್ರಾಧಿಕಾರವು “ಕನ್ನಡ ಕಾಯಕ ವರ್ಷಾಚರಣೆ” ಹೆಸರಿನಲ್ಲಿ ಒಂದು ವರ್ಷದ ಯೋಜನೆ ಹಮ್ಮಿಕೊಂಡಿದ್ದು, ಇದಕ್ಕೆ ಪೂರಕವಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕನ್ನಡ ಜಾಗೃತಿ ಸಮಿತಿ ಹಾಗೂ ಕನ್ನಡ ಕಾಯಕ ಪಡೆಯ ಮೂಲಕ "ಶುದ್ಧ ಕನ್ನಡ ನಾಮಫಲಕ ಜಾಗೃತಿ ಅಭಿಯಾನ" ವನ್ನು ಹಮ್ಮಿಕೊಂಡಿದ್ದು, ಅಭಿಯಾನದ ಜಾಗೃತಿ ವಾಹನಕ್ಕೆ ಪಾಲಿಕೆ ಕೇಂದ್ರ ಕಛೇರಿಯ ಆವರಣದಲ್ಲಿ ಇಂದು ಮಾನ್ಯ ಆಡಳಿತಗಾರರು ಶ್ರೀ ಗೌರವ್ ಗುಪ್ತಾ, ಮಾನ್ಯ ಆಯುಕ್ತರು ಶ್ರೀ ಎನ್.ಮಂಜುನಾಥ್ ಪ್ರಸಾದ್ ರವರು, ಶ್ರೀ ಟಿ.ಎಸ್.ನಾಗಾಭರಣ, ಮಾನ್ಯ ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ರವರೊಂದಿಗೆ ಚಾಲನೆ ನಿಡಲಾಯಿತು. ಈ ವೇಳೆ ವಿಶೇಷ ಆಯುಕ್ತರುಗಳಾದ ಜೆ.ಮಂಜುನಾಥ್, ರಂದೀಪ್, ರವೀಂದ್ರ ಹಾಗೂ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಗರದಲ್ಲಿ ಶುದ್ಧ ಕನ್ನಡ ನಾಮಫಲಕ ಜಾಗೃತಿ ಅಭಿಯಾನವನ್ನು ಹಮ್ಮಿಕೊಂಡಿದ್ದು, ಪಾಲಿಕೆಯು ಪ್ರಾಧಿಕಾರದ ಜೊತೆ ಕೈಜೋಡಿಸಿ ನಾಮಫಲಕಗಳಲ್ಲಿ ಕನ್ನಡ ಭಾಷೆ ಅಳವಡಿಸುವ ಸಂಬಂಧ ಹೆಚ್ಚು ಆದ್ಯತೆ ನೀಡಿ ಅದನ್ನು ಅನುಷ್ಠಾನ ಮಾಡಲು ಸೂಕ್ತ ಕ್ರಮವಹಿಸಲಾಗುವುದು ಎಂದು ಆಡಳಿತಗಾರರು ಗೌರವ್ ಗುಪ್ತಾ ರವರು ತಿಳಿಸಿದರು.

ಕನ್ನಡ ನಾಮಫಲಕಗಳಲ್ಲಿ ಅಕ್ಷರಗಳ ಲೋಪದೋಷಗಳಿದ್ದು, ಅದನ್ನು ಸರಿಪಡಿಸಲು ಪ್ರಾಧಿಕಾರವು ತಿಳಿಸಿದೆ. ಆ ಬಗ್ಗೆ ಕ್ರಮವಹಿಸಲಾಗುವುದು. ಪ್ರಾಧಿಕಾರದ ವತಿಯಿಂದ ಪಾಲಿಕೆ ವ್ಯಾಪ್ತಿಯ ಎಲ್ಲಾ 28 ವಿಧಾನಸಭಾ ಕ್ಷೇತ್ರಗಳಿಗೂ ಒಬ್ಬ ಪ್ರತಿನಿಧಿಯನ್ನು ನಿಯೋಜನೆ ಮಾಡಿದ್ದು, ಅವರು ಪಾಲಿಕೆಯ ಅಧಿಕಾರಿಗಳ ಜೊತೆ ಸಮಾಲೋಚನೆ ಮಾಡಿಕೊಂಡು ಮುಂದಿನ ದಿನಗಳಲ್ಲಿ ಕನ್ನಡ ನಾಮಫಲಕಗಳ ಅನುಷ್ಠಾನ ಮಾಡಲಾಗುವುದು. ನಗರದಲ್ಲಿರುವ ಅನ್ಯಭಾಷಿಕರಿಗೆ ಕನ್ನಡ ಲಿಪಿ ಹಾಗೂ ಕನ್ನಡ ಭಾಷೆಯ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ಕೂ ಪ್ರಾಧಿಕಾರ ಮುಂದಾಗಿದೆ. ಕನ್ನಡ ಭಾಷೆ ಅಳವಡಿಕೆಗೆ ಪಾಲಿಕೆ ವತಿಯಿಂದ ಎಲ್ಲಾ ರಿತಿಯ ಸಹಾಯ ಮಾಡಲಾಗವುದು ಎಂದು ಆಡಳಿತಗಾರರು ತಿಳಿಸಿದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಶ್ರೀ ಟಿ.ಎಸ್.ನಾಗಾಭರಣ ರವರು ಮಾತನಾಡಿ, ಕರ್ನಾಟಕದಲ್ಲಿ ಕನ್ನಡವೇ ಸಾರ್ವಭೌಮ. ಇಲ್ಲಿ ಕನ್ನಡೇತರರೂ ಇದ್ದು, ಬೇರೆ ಬೇರೆ ರಾಜ್ಯಗಳಿಂದ ಇಲ್ಲಿಗೆ ಬಂದು ನೆಲೆಸಿದ್ದಾರೆ. ಇಲ್ಲಿ ಒಗ್ಗೂಡಿ ಬೆಳೆಯುವ ಸಂಸ್ಕೃತಿಯಿದ್ದು, ಅನ್ಯ ಭಾಷಿಕರಿಗೆಲ್ಲಾ ಕನ್ನಡ ಭಾಷೆಯ ತಿಳುವಳಿಕೆ ಮೂಡಿಸಬೇಕು ಎಂದು ಹೇಳಿದರು.

ಪಾಲಿಕೆ ವ್ಯಾಪ್ತಿಯಲ್ಲಿ ಶುದ್ಧ ಕನ್ನಡ ನಾಮಫಲಕ ಅಭಿಯಾನ ಹಮ್ಮಿಕೊಂಡಿದ್ದು, ಇದು ಕೇವಲ ಅಂಗಡಿ ಮುಂಗಟ್ಟು, ರಸ್ತೆ ನಾಮಫಲಕಕ್ಕೆ ಸೀಮಿತವಲ್ಲ. ನಾಮಫಲಕ ಅಳವಡಿಸುವ ಮೂಲಕ ಕನ್ನಡ ಸಂಸ್ಕೃತಿಯನ್ನು ಸಾರಿ, ಮನಸ್ಸಗಳನ್ನು ಕಟ್ಟಿಕೊಟ್ಟು ಅನ್ಯಭಾಷಿಕರಿಗೆ ಅಕ್ಷರದಾಸೋಹ ನಡೆಯಬೇಕಿದೆ. ಮುಖ್ಯಮಂತ್ರಿಗಳು ಈ ವರ್ಷವನ್ನು ಕನ್ನಡ ಕಾಯಕ ವರ್ಷ ಎಂದು ಘೋಷಿಸಿದ್ದು, ಅದರ ಭಾಗವಾಗಿ ಈ ಅಭಿಯಾನವನ್ನು ಪ್ರಾರಂಭಿಸಲಾಗಿದೆ. ಮುಂದಿನ ದಿನಗಳಲ್ಲಿ ನಗರವು ಶುದ್ಧ ಕನ್ನಡಮಯವಾಗುವುದನ್ನು ಕಾಣಬೇಕೆಂಬುದು ನನ್ನ ಕನಸಾಗಿದೆ ಎಂದು ಹೇಳಿದರು.

ಆಯುಕ್ತರು ಶ್ರೀ ಎನ್.ಮಂಜುನಾಥ್ ಪ್ರಸಾದ್ ರವರು ಮಾತನಾಡಿ, ನಗರದ ಎಲ್ಲಾ ಅಂಗಡಿ ಮುಂಗಟ್ಟುಗಳಲ್ಲಿ ಕನ್ನಡಕ್ಕೆ ಹೆಚ್ಚು ಪ್ರಾಶಸ್ತ್ಯ ಕೊಡಬೇಕು. ಈ ಸಂಬಂಧ ನಾಮಫಲಕಗಳಲ್ಲಿ ಶೇ. 67 ರಷ್ಟು ಕನ್ನಡ ಭಾಷೆ ಹಾಗೂ ಶೇ. 33 ರಷ್ಟು ಇನ್ನಿತರೆ ಭಾಷೆಯಿರಬೇಕೆಂಬ ಆದೇಶವಿದ್ದು, ಅದನ್ನು ಅನುಷ್ಠಾನಮಾಡದ ಅಂಗಡಿಗಳಿಗೆ ಉದ್ದಿಮೆ ಪರವಾನಗಿ ರದ್ದುಗೊಳಿಸುವುದಾಗಿ ಈ ಹಿಂದೆ ಸೂಚನೆ ನೀಡಲಾಗಿತ್ತು. ಆದರೆ, ಈ ಬಗ್ಗೆ ಕೆಲವರು ಹೈಕೋರ್ಟ್ ಗೆ ಹೋಗಿ ತಡೆ ತಂದ ಪರಿಣಾಮ ಅದನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸಾಧ್ಯವಾಗಿಲ್ಲ. ಆದ್ದರಿಂದ ಜಾಹಿರಾತು ಬೈಲಾದಲ್ಲೇ ನಾಮಫಲಕಗಳಲ್ಲಿ ಕನ್ನಡ ಭಾಷೆಯಿರಬೇಕೆಂಬ ಅಂಶವನ್ನು ಸೇರಿಸಲಾಗುತ್ತಿದ್ದು, ಜಾರಿಯಾದ ಬಳಿಕ ಅದನ್ನು ಯಾರೂ ಪ್ರಶ್ನಿಸಲು ಸಾಧ್ಯವಾಗುವುದಿಲ್ಲ. ಕಾನೂನಿನಲ್ಲಿ ನಿಯಮ ಜಾರಿಯಾದ ಬಳಿಕ ಯಾರಾದರೂ ಉಲ್ಲಂಘನೆ ಮಾಡಿದಲ್ಲಿ ಅವರ ಮೇಲೆ ಕಾನೂನಿನ ಪ್ರಕಾರ ಕ್ರಮ ಕೈಗೊಳ್ಳಬಹುದಾಗುತ್ತದೆ ಎಂದು ಹೇಳಿದರು.

ಇನ್ನು ನಾಮಫಲಕಗಳಲ್ಲಿ ಕೆಲ ಅಕ್ಷರಗಳು ತಪ್ಪಾಗಿರುತ್ತವೆ. ಈ ಬಗ್ಗೆ ಕನ್ನಡ ಜಾಗೃತಿ ಪಡೆಯು ಕೆಲವನ್ನು ಪಟ್ಟಿ ಮಾಡಿ ಕೊಟ್ಟಿದೆ. ಪಾಲಿಕೆ ವ್ಯಾಪ್ತಿಯ ಎಲ್ಲಾ ವಿಧಾನಸಭಾ ಕ್ಷೇತ್ರದ ಕಾರ್ಯಪಾಲಕ ಇಂಜಿನಿಯರ್ ಹಾಗೂ ಕಂದಾಯ ಅಧಿಕಾರಿಗಳು ನಾಮಫಲಕಗಳ ಪಟ್ಟಿ ಮಾಡಿ ನೀಡುತ್ತಾರೆ. ಆ ಬಳಿಕ ನಾಮಫಲಕಗಳಲ್ಲಿ ಅಕ್ಷರಗಳು ತಪ್ಪಿದ್ದರೆ ಅದನ್ನು ಸರಿಪಡಿಸಲಾಗುವುದು ಎಂದು ತಿಳಿಸಿದರು.

ನಾಮಫಲಕಗಳಲ್ಲಿ ಕನ್ನಡ ಅಳವಡಿಸುವ ಬಗ್ಗೆ ಜಾಗೃತಿ:

ಶುದ್ಧ ಕನ್ನಡ ನಾಮಫಲಕ ಜಾಗೃತಿ ಅಭಿಯಾನದ ಅಂಗವಾಗಿ ಜಾಗೃತಿ ವಾಹನವು ನಗರದ ವಿವಿಧೆಡೆ ಚಲಿಸಿ ಕನ್ನಡ ನಾಮಫಲಕ ಅಳವಡಿಸುವ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲಿದೆ. ಕನ್ನಡ ಬಾವುಟ ಕೆಂಪು-ಹಳದಿ ಬಣ್ಣದ ವಾಹನದ ಮೂಲಕ ಕನ್ನಡದ ಘೋಷಣೆ, ಕನ್ನಡದ ಮಹತ್ವವನ್ನು ಸಾರಲಾಗಿದೆ. ಈ ಅಭಿಯಾನದಲ್ಲಿ ಅನ್ಯ ಭಾಷೆಯ ಜನರಿಗೂ ಕನ್ನಡ ಲಿಪಿ, ಕನ್ನಡ ಸಂಸ್ಕೃತಿಯ ಮಾಹಿತಿಯ ಬಗ್ಗೆ ಅರಿವು ಮೂಡಿಸಲಾಗುತ್ತದೆ.